# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ**

ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

**ದಿನಾಂಕ : 07.02.2023**

**ಸಂಖ್ಯೆ : ಸ.ಇಂ/ವಾ-33/ವಾರ್ಡ್‌ಸಭೆ/2022-23**

## ವಾರ್ಡ್-33(ಕೆಂಗೇರಿ)ರ ವಾರ್ಡ್ ಸಭೆಯ ನಡವಳಿ.

ದಿನಾಂಕ: 07/02/2023ರಂದು ಕೆಂಗೇರಿ ಉಪ ವಿಭಾಗ ವಾರ್ಡ್-33ರ ವಾರ್ಡ್ ಕಛೇರಿಯಲ್ಲಿ ಶ್ರೀ ಕೆ.ಆರ್.ಸತೀಶ್ ಕುಮಾರ್, ಕಂದಾಯ ಅಧಿಕಾರಿ, ರಾರಾನಗರ ಉಪವಲಯ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರ ಸಂ | ಸದಸ್ಯರ ಹೆಸರು | ಪದನಾಮ/ಇಲಾಖೆ | ಹಾಜರಾತಿ |
|---|---|---|---|
| 1. | ಶ್ರೀ ಕೆ.ಆರ್.ಸತೀಶ್ ಕುಮಾರ್ | ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ಕಂದಾಯ ಅಧಿಕಾರಿ, ರಾರಾನಗರ ಉಪವಲಯ, ಬಿ.ಬಿ.ಎಂ.ಪಿ | ಹಾಜರಿದ್ದರು |
| 2. | ಶ್ರೀ ಎನ್.ನಟರಾಜ | ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.33, ಕೆಂಗೇರಿ | ಹಾಜರಿದ್ದರು |
| 3. | ಶ್ರೀ ರವಿಚಂದ್ರ | ಸಹಾಯಕ ಅಭಿಯಂತರರು ಬಿ.ಡಬ್ಲೂ.ಎಸ್.ಎಸ್.ಬಿ | ಹಾಜರಿದ್ದರು |
| 4. | ಶ್ರೀ ಬಿ.ಕೆ ಚಂದ್ರಶೇಖರ್ | ಕಿರಿಯ ಅಭಿಯಂತರರು(ವಿದ್ಯುತ್) ರಾರಾನಗರ ವಲಯ, ಬಿಬಿಎಂಪಿ | ಹಾಜರಿದ್ದರು |
| 5. | ಶ್ರೀಮತಿ ಎಸ್. ಊರ್ಮಿಳಾದೇವಿ | ಕಿರಿಯ ಅಭಿಯಂತರರು(ವಿದ್ಯುತ್) ರಾರಾನಗರ ವಲಯ, ಬಿಬಿಎಂಪಿ | ಹಾಜರಿದ್ದರು |
| 6. | ಶ್ರೀ ತಿಮ್ಮರಾಜು | ಕೆಲಸ ಪರಿವೀಕ್ಷಕರು ವಾರ್ಡ್ ನಂ.159, ಕೆಂಗೇರಿ, ಬಿಬಿಎಂಪಿ | ಹಾಜರಿದ್ದರು |
| 7. | ಶ್ರೀ ಚಂದ್ರಶೇಖರ್ | ಕಂದಾಯ ಪರಿವಿಕ್ಷಕರು ಕೆಂಗೇರಿ ಉಪವಲಯ, ಬಿಬಿಎಂಪಿ | ಹಾಜರಿದ್ದರು |
| 8. | ಶ್ರೀ ಗೋವರ್ಧನ್ | ಕಂದಾಯ ವಸೂಲಿಗಾರರು ಕೆಂಗೇರಿ ಉಪವಲಯ, ಬಿಬಿಎಂಪಿ | ಹಾಜರಿದ್ದರು |



Scanned with CamScanner

| | | | |
|---|---|---|---|
| 9. | ಶ್ರೀ ಕೆ.ವಿ. ಸುನೀಲ್ | ವಾರ್ಡ್ ಮಾರ್ಷಲ್<br>ವಾರ್ಡ್ ನಂ.159, ಕೆಂಗೇರಿ | ಹಾಜರಿದ್ದರು |

ಶ್ರೀ ನಟರಾಜ್.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಿ, ಸಭೆಯಲ್ಲಿ ವಾರ್ಡ್‌ನಲ್ಲಿ ಕುಂದು ಕೊರತೆಯ ಬಗ್ಗೆ ಚರ್ಚಿಸಲು ಮನವಿ ಮಾಡಲಾಯಿತು.

1) ಸಾರ್ವಜನಿಕರು ಕೋವಿಡ್-19ರ ಸಾಂಕ್ರಾಮಿಕ ರೋಗದ (ರೂಪಾಂತರಿ ಕರೋನದ) ಬಗ್ಗೆ ಅರಿವುದ ಮೂಡಿಸುವ ಸಲುವಾಗಿ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು, ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಲಸಿಕೆಯನ್ನು ಪಡೆಯಲು ಸಾರ್ವಜನಿಕರು ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸಭೆಯಲ್ಲಿ ತಿಳಿಸಿದರು. ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಮತ್ತು ಮಾಸ್ಕ್ ಹಾಗೂ ಸ್ಯಾನಿಟೈಸರ್ ಖಡ್ಡಾಯವಾಗಿ ಉಪಯೋಗಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸ್ಥಳೀಯ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಬೂಸ್ಟರ್ ಲಸಿಕೆಯನ್ನು ಪಡೆದುಕೊಳ್ಳಲು ಮತ್ತು ಇದರ ಸದುಪಯೋಗ ಪಡೆಯಲು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ತಿಳಿಸಲಾಯಿತು.

2) ಸಭೆಯಲ್ಲಿ ಕೆಲವು ನಾಗರೀಕರು ಮಾತನಾಡಿ ವಾರ್ಡ್ ನಂ.33, ವ್ಯಾಪ್ತಿಯಲ್ಲಿ ಬರುವ ವಳಗೇರಹಳ್ಳಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಿಲ್ಲವೆಂದು ಸಾರ್ವಜನಿಕರು ಹಿಂದಿನ ಸಭೆಯಲ್ಲಿ ತಿಳಿಸಿದ್ದರು.

ಈ ಬಗ್ಗೆ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಅಮೃತ ನಗರೋತ್ಥಾನ ಅನುದಾನದಡಿಯಲ್ಲಿ ಕಾಮಗಾರಿಯನ್ನು ಕೈಗೊಂಡಿದ್ದು, ರಸ್ತೆಗಳಿಗೆ ಡಾಂಬರೀಕರಣ ಮಾಡಲಗಿದೆ ಎಂಬ ಅಂಶವನ್ನು ಸಭೆಯಲ್ಲಿ ತಿಳಿಸಿದರು.

3) ವಾರ್ಡ್ ನಂ.33ರ ವ್ಯಾಪ್ತಿಯಲ್ಲಿ ಬರುವ ರಸ್ತೆಗಳ ಅಕ್ಕಪಕ್ಕದಲ್ಲಿರುವ ಒಣಗಿರುವ ಮರಗಳ ಕೊಂಬೆಗಳನ್ನು ಕತ್ತರಿಸಿ ತೆರವುಗೊಳಿಸದೇ ಹಾಗೇ ಬಿಟ್ಟಿರುವುದರಿಂದ ಪಾದಾಚಾರಿಗಳ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು.

ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್ ನಂ.33, ಕೆಂಗೇರಿ ವ್ಯಾಪ್ತಿಯಲ್ಲಿ ರಸ್ತೆಗಳ ಅಕ್ಕಪಕ್ಕದಲ್ಲಿರುವ ಮರಗಳ ಒಣಗಿದ ಕೊಂಬೆಗಳನ್ನು ಕತ್ತರಿಸಲು ತೆರವುಗೊಳಿಸಲು ಸಂಬಂಧಪಟ್ಟ



Scanned with CamScanner

ಅಧಿಕಾರಿಯವರಿಗೆ ಕ್ರಮವಹಿಸಲು ತಿಳಿಸಲಾಗಿದೆ ಹಾಗೂ ಕತ್ತರಿಸಿದ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು (ಘ.ತ್ಯಾ.ನಿ) ರವರಿಗೆ ತಿಳಿಸಿದರು.

4) ವಾರ್ಡ್‌ನ ನಾಗರೀಕರು ಸಭೆಯಲ್ಲಿ ಮಾತನಾಡಿ ವಾರ್ಡ್ ನಂ.33. ಕೆಂಗೇರಿ ವ್ಯಾಪ್ತಿಯಲ್ಲಿ ಬೀದಿ ದೀಪಗಳನ್ನು ಸರಿಯಾಗಿ ಅಳವಡಿಸದೇ ಇರುವುದರಿಂದ ರಾತ್ರಿ ವೇಳೆಯಲ್ಲಿ ಬೀದಿ ದೀಪಗಳು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲವೆಂದು ತಿಳಿಸಿದರು.

ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ಸಮಸ್ಯೆಯನ್ನು ಬಗೆಹರಿಸಲು ಕ್ರಮವಹಿಸುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು(ವಿದ್ಯುತ್) ರವರಿಗೆ ಸಭೆಗೆ ಹಾಜರಾಗಲು ತಿಳಿಸುವುದಾಗಿ ಸಭೆಗೆ ತಿಳಿಸಿದರು.

ಕೊನೆಯದಾಗಿ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿ/ಸಿಬ್ಬಂದಿವರ್ಗದವರು ಹಾಗೂ ಸಾರ್ವಜನಿಕರಿಗೆ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

([illegible])
ಕಾರ್ಯದರ್ಶಿ
ಸ.ಅ. ವಾರ್ಡ್ ನಂ.33. ಕೆಂಗೇರಿ

(ಕೆ.ಆರ್.ಸತೀಶ್ ಕುಮಾರ್)
ಕಂದಾಯ ಅಧಿಕಾರಿ
ಹಾಗೂ ವಾರ್ಡ್ ಸಮಿತಿ ಸಭೆ ಅಧ್ಯಕ್ಷರು
ವಾರ್ಡ್‌ನಂ. –33, ಕೆಂಗೇರಿ

ರವರಿಗೆ,

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
3) ಸಹಾಯಕ ಕಂದಾಯ ಅಧಿಕಾರಿ ಅಧಿಕಾರಿಗಳು, ಕೆಂಗೇರಿ ವಲಯ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು, (ಘ.ತ್ಯಾ.ನಿ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
5) ಪೊಲೀಸ್ ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್ ಠಾಣೆ (ಕಾನೂನು ಸುವ್ಯವಸ್ಥೆ) ರವರ ಮಾಹಿತಿಗಾಗಿ. ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
6) ಪೊಲೀಸ್ ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್ ಠಾಣೆ (ಸಂಚಾರಿ) ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
7) ಆರೋಗ್ಯ ಅಧಿಕಾರಿ, ಕೆಂಗೇರಿ, ಕೆಂಗೇರಿ ಉಪನಗರ ಪ್ರಾ.ಆ.ಕೇಂದ್ರ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಇಂಜಿನಿಯರ್, ಬೆಸ್ಕಾಂ ಕೆಂಗೇರಿ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.
9) ಸಹಾಯಕ ಇಂಜನಿಯರ್ ಬಿ.ಡಬ್ಲ್ಯೂ.ಎಸ್. ಎಸ್.ಬಿ., ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.



Scanned with CamScanner

10) ತೋಟಗಾರಿಕಾ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ, ಸದರಿ ಸಭೆಗೆ ಹಾಜರಾಗಲು/ತಮ್ಮ ಪ್ರತಿನಿಧಿ ಸಿಬ್ಬಂದಿಯವರನ್ನು ನಿಯೋಜಿಸಲು ಕೋರಲಾಗಿದೆ.

11) ವಾರ್ಡ್ ವ್ಯಾಪ್ತಿಯ ಸಾರ್ವಜನಿಕರು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಲು ಅನುವಾಗುವಂತೆ ಸೂಚನಾ ಫಲಕಕ್ಕೆ ಅಳವಡಿಸಲು

12) ಎಲ್ಲಾ ವಾರ್ಡ್ ಕಮಿಟಿ ಸದಸ್ಯರುಗಳಿಗೆ.



Scanned with CamScanner